ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ,
ಕುಂದಾಪುರ

ಸಿ.ಸಿ. ನಂಬ್ರ:390/2018

ಚಾಸಾ:3 ಪ್ರಾಸಾ:3

ದಿನಾಂಕ: 28.11.2023

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಗುರುರಾಜ ಹೆಬ್ಬಾರ್ |
| ತಂದೆಯ ಹೆಸರು | : | ನಾರಾಯಣ ಹೆಬ್ಬಾರ್ |
| ವಯಸ್ಸು | : | 49 ವರ್ಷ |
| ಉದ್ಯೋಗ | : | ರೈತ |
| ವಾಸ ಸ್ಥಳ | : | ತ್ರಾಸಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:</u>**

ನ್ಯಾಯಾಲಯದ ಮುಂದೆ ಇರುವ ಆರೋಪಿ ನನಗೆ ಗೊತ್ತಿಲ್ಲ. ನಾನು ಅಪಘಾತವನ್ನು ನೋಡಿರುವುದಿಲ್ಲ. ಸಾಕ್ಷಿಗೆ ನಿಪಿ-2 ರ ಮಹಜರನ್ನು ಹಾಗೂ ನಿಪಿ-3 ರ ನಕಾಶೆಯನ್ನು ತೋರಿಸಲಾಗಿ ಅವುಗಳಲ್ಲಿನ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು, ಸದ್ರಿ ಸಹಿಗಳನ್ನು ನಿಪಿ-2(ಸಿ) ಮತ್ತು ನಿಪಿ-3(ಸಿ) ಎಂದು ಗುರುತಿಸಲಾಯಿತು. ನಿಪಿ-2 ಮತ್ತು 3 ರಲ್ಲಿನ ಸಹಿಗಳನ್ನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದ್ರಿ ದಾಖಲೆಗಳಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:</u>**

ದಿ: 09-12-2017 ರಂದು ನಾನು ಕೆಲಸದ ನಿಮಿತ್ತ ನನ್ನ ಮೋಟಾರು ಸೈಕಲಿನಲ್ಲಿ ಮರವಂತೆ ಕಡೆಗೆ ಹೊರಟ್ಟಿದಾಗ ಬೆಳಿಗ್ಗೆ 8-30 ಗಂಟೆ ಸಮಯಕ್ಕೆ ತ್ರಾಸಿ ಜಂಕ್ಷನ್ ನಿಂದ ಸ್ವಲ್ಪ ಮುಂದೆ ನನ್ನ ಹಿಂದಿನಿಂದ ಕುಂದಾಪುರ ಕಡೆಯಿಂದ ಬೈಂದೂರು

ಕಡೆಗೆ ಒಂದು ಲಾರಿಯನ್ನು ಅದರ ಚಾಲಕ ಅತೀ ವೇಗ ಹಾಗೂ ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಒಂದು ವಾಹನವನ್ನು ಓವರ್ ಟೇಕ್ ಮಾಡಿ ತೀರ ಬಲಭಾಗಕ್ಕೆ ಹೋಗಿ ಮರವಂತೆ ಕಡೆಯಿಂದ ತ್ರಾಸಿ ಜಂಕ್ಷನ್ ಕಡೆಗೆ ಸೈಕಲಿನಲ್ಲಿ ಬರುತ್ತಿದ್ದ ವ್ಯಕ್ತಿಗೆ ಲಾರಿ ಡಿಕ್ಕಿ ಹೊಡೆದು ಸೈಕಲ್ ಸವಾರ ಕೆಳಗೆ ಬಿದ್ದಿರುತ್ತಾರೆ ಎಂದರೆ ಸರಿಯಲ್ಲ.

ಅಪಘಾತ ನೋಡಿದ ನಾನು ಮತ್ತು ರಸ್ತೆಯಲ್ಲಿ ಹೋಗುತ್ತಿದ್ದವರು ಸೈಕಲ್ ಸವಾರರನ್ನು ಎತ್ತಿ ಉಪಚರಿಸಿದ್ದು, ಆತ ನನ್ನ ಪರಿಚಯದ ಆನಂದ ಹೆಬ್ಬಾರ್ ಆಗಿದ್ದು ಅವರ ತಲೆಗೆ ತೀವ್ರ ಸ್ವರೂಪದ ಗಾಯ ಉಂಟಾಗಿ ಕೈ ಕಾಲಿಗೆ ತರುಚಿದ ಗಾಯ ಉಂಟಾಗಿದ್ದು, ಅಪಘಾತದ ವಿಷಯವನ್ನು ಅವರ ಮನೆಯವರಿಗೆ ತಿಳಿದು ಆನಂದ ಹೆಬ್ಬಾರ್ ರವರ ಮಗಳು ಬಂದು ಅವರನ್ನು ಅಂಬುಲೆನ್ಸ್ ನಲ್ಲಿ ಚಿಕಿತ್ಸೆಗೆ ಕರೆದುಕೊಂಡು ಹೋದರು ಎಂದರೆ ಸರಿಯಲ್ಲ.

ಅಪಘಾತದ ಸ್ಥಳದಲ್ಲಿ ಲಾರಿ ನಿಂತಿದ್ದು ಅದರ ನಂಬ್ರ ಕೆಎಲ್ 05- ಎಎಂ 9795 ಆಗಿದ್ದು ಲಾರಿಯ ಚಾಲಕನ ಹೆಸರು ಅಜೋಮನ್ ವರ್ಗಿಸ್ ಎಂದು ತಿಳಿದು ಬಂದಿದ್ದು, ಗಾಯಾಳು ಆನಂದ ಹೆಬ್ಬಾರವರನ್ನು ಚಿಕಿತ್ಸೆಗಾಗಿ ಕರೆದುಕೊಂಡು ಹೋಗುವಾಗ ದಾರಿಯಲ್ಲಿ ಮೃತಪಟ್ಟ ವಿಷಯ ನನಗೆ ತಿಳಿದಿದ್ದು, ಈ ಅಪಘಾತಕ್ಕೆ ಲಾರಿ ಚಾಲಕನ ಅತೀ ವೇಗ ಮತ್ತು ಅಜಾಗರೂಕತೆಯ ಚಾಲನೆಯೇ ಕಾರಣವಾಗಿರುತ್ತದೆ ಎಂದರೆ ಸರಿಯಲ್ಲ.

ದಿಃ 10-12-2017 ರಂದು ಪೊಲೀಸರು ಅಪಘಾತ ಸ್ಥಳಕ್ಕೆ ಮಹಜರು ಮಾಡಲು ಬಂದಿದ್ದು, ಚಾಸಾ-2 ರವರು ತೋರಿಸಿಕೊಟ್ಟ ಸ್ಥಳದಲ್ಲಿ ಚಾಸಾ-1, 2 ಮತ್ತು ನನ್ನ ಸಮಕ್ಷಮ ಬೆಳಿಗ್ಗೆ 9 ರಿಂದ 9-45 ರವರೆಗೆ ಮಹಜರು ಮಾಡಿ ಅಪಘಾತಕ್ಕೆ ಸಂಬಂಧಿಸಿದ ಎರಡು ವಾಹನಗಳನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪೊಲೀಸರು ಸ್ಥಳದಲ್ಲಿ ಮಹಜರು ಮಾಡಿ, ಅದನ್ನು ನನಗೆ ಓದಿ ತಿಳಿಸಿ ಸ್ಥಳದಲ್ಲಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಈ ಮೇಲೆ ಓದಿ ಹೇಳಿದಂತೆ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-7 ಎಂದು ಗುರುತಿಸಲಾಯಿತು. ಸಾಕ್ಷಿಗೆ ಮಹಜರು ಸಮಯದಲ್ಲಿ ತೆಗೆಯಲಾದ ಛಾಯಚಿತ್ರವನ್ನು ತೋರಿಸಲಾಗಿ ಅದರಲ್ಲಿ ತಾನು ಇರುವುದಾಗಿ ಗುರುತಿಸಿದ್ದು, ಸದ್ರಿ ಛಾಯಚಿತ್ರವನ್ನು ಈಗಾಗಲೇ ನಿಪಿ-5 ಎಂದು ಗುರುತಿಸಲಾಗಿರುತ್ತದೆ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**